ಇ) ಸದ್ಯಕ್ಕೆ ಆರೋಗ್ಯ ಕಾರ್ಯಕ್ರಮಗಳನ್ನು ಜಿಲ್ಲಾ ಪರಿಷತ್ತಿನಿಂದ ಹಿಂದಕ್ಕೆ ಪಡೆಯುವ ಯಾವುದೇ ಪ್ರಸ್ತಾವನೆಯೂ ಇಲ್ಲ.

ಸಹಾಯಕ ಶಿಕ್ಷಣ ಅಧಿಕಾರಿಗಳು ಮತ್ತು ಶಾಲಾ ತನಿಖಾಧಿಕಾರಿಗಳು

1213 - ಶ್ರೀ ಸಿ.ಎಂ. ಲಿಂಗಪ್ಪ (ರಾಮನಗರ ಕ್ಷೇತ್ರ) : ಮಾನ್ಯ ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸಹಾಯಕ ಶಿಕ್ಷಣ ಅಧಿಕಾರಿಗಳು ಮತ್ತು ಶಾಲಾ ತನಿಖಾಧಿಕಾರಿಗಳು ವರ್ಷದಲ್ಲಿ ಪ್ರವಾಸ ಮಾಡಬೇಕಾದ ಎಷ್ಟು ದಿನಗಳೆಷ್ಟು?*

ಆ) *ಎಷ್ಟು ಶಾಲೆಗಳ ತಪಾಸಣೆ ಮಾಡಬೇಕು?*

ಇ) *ಸಹಾಯಕ ಶಿಕ್ಷಣಾಧಿಕಾರಿಗಳಿಗೆ ಮತ್ತು ತನಿಖಾಧಿಕಾರಿಗಳಿಗೆ ಪ್ರವಾಸ ಮಾಡಲು ಸರ್ಕಾರ ಒದಗಿಸಿರುವ ಸೌಲಭ್ಯವೇನು?*

ಶ್ರೀ ಎಂ. ವೀರಪ್ಪ ಮೊಯ್ಲಿ (ಶಿಕ್ಷಣ ಹಾಗೂ ಸಂಸದೀಯ ವ್ಯವಹಾರ ಸಚಿವರು) :

ಅ) 180 ದಿನಗಳು.

ಆ) ಸಹಾಯಕ ಶಿಕ್ಷಣಾಧಿಕಾರಿಗಳು ವರ್ಷದಲ್ಲಿ ಕನಿಷ್ಟ 30 ಹಿರಿಯ ಪ್ರಾಥಮಿಕ ಶಾಲೆಗಳನ್ನು ತಪಾಸಣೆ ಮಾಡಬೇಕಾಗಿರುವುದು. ಪದವೀಧರ ಶಾಲಾ ತನಿಖಾಧಿಕಾರಿಗಳು ಅವರ ವ್ಯಾಪ್ತಿಗೆ ಬರುವ 75 ಕಿರಿಯು · ಪ್ರಾಥಮಿಕ ಶಾಲೆಗಳನ್ನು ತಪಾಸಣೆ ಮಾಡಬೇಕಾಗಿರುವುದು.

ಇ) ಸಹಾಯಕ ಶಿಕ್ಷಣಾಧಿಕಾರಿಗಳಿಗೆ ಮಾಹೆಯಾನ ರೂ 100-00 ರಂತೆ ನಿಗದಿತ ಪ್ರವಾಸ ಭತ್ಯೆ ನೀಡಲಾಗುತ್ತಿದೆ. ಪದವೀಧರ ಶಾಲಾ ತನಿಖಾಧಿಕಾರಿಗಳಿಗೆ ಮಾಹೆಯಾನ ರೂ. 50-00 ರಂತೆ ನಿಗದಿತ ಪ್ರವಾಸ ಭತ್ಯೆಯನ್ನು ನೀಡಲಾಗುತ್ತಿದೆ.

ನೇಸರ್ಗಿ ಗ್ರಾಮದಲ್ಲಿರುವ ಹೆರಿಗೆ ಆಸ್ಪತ್ರೆಗೆ ಮಹಿಳಾ ವೈದ್ಯಾಧಿಕಾರಿ ನೇಮಕಾತಿ ಬಗ್ಗೆ.

1668 - ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವೆಯರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕು ಪೈಕಿ ನೇಸರ್ಗಿ ಗ್ರಾಮದಲ್ಲಿರುವ ಹೆರಿಗೆ ಆಸ್ಪತ್ರೆಗೆ ಮಹಿಳಾ ವೈದ್ಯಾಧಿಕಾರಿ ಇದುವರೆವಿಗೂ ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಿಂದಿನ ಆರೋಗ್ಯ ಮಂತ್ರಿಗಳು ಅಲ್ಲಿ ಒಬ್ಬ ವೈದ್ಯಾಧಿಕಾರಿಯನ್ನು ನಿಯೋಜನೆ ಮೇರೆಗೆ ನೇಮಕಾತಿ ಮಾಡಬೇಕೆಂದು ಮಾಡಿದ ಆಜ್ಞೆಯ ಮೇರೆಗೆ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ?*

ಇ) *ಆಸ್ಪತ್ರೆಯಲ್ಲಿ ನರ್ಸ್ ಹಾಗೂ ಇತರೆ ಸಿಬ್ಬಂದಿಗಳು ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಈ) *ಅಲ್ಲಿ ಹೆರಿಗೆ ಆಸ್ಪತ್ರೆ ಕಟ್ಟಡ ಸಹ ಇದ್ದ ಸಂಗತಿ ಸರ್ಕಾರದ ಗಮನಕ್ಕೆ ಬಂದಿಯೇ? ಮತ್ತು ಈ ಹೆರಿಗೆ ಆಸ್ಪತ್ರೆ ಕಟ್ಟಡವನ್ನು ಯಾವಾಗ ಕಟ್ಟಲಾಯಿತು?*

ಉ) *ವೈದ್ಯಾಧಿಕಾರಿಯನ್ನು ನೇಮಕಾತಿ ಮಾಡಲು ಹಿಂದಿನ ಅಧಿವೇಶನದಲ್ಲಿ ಕೂಡಲೇ ನೇಮಕಾತಿ ಮಾಡಲಾಗುವುದೆಂದು ಆಶ್ವಾಸನೆ ನೀಡಿದ್ದರೂ ಕೂಡ ಇಲ್ಲಿಯವರೆವಿಗೂ ಏಕೆ ನೇಮಕಾತಿಯನ್ನು ಮಾಡಿರುವುದಿಲ್ಲ?*